ಬುಧವಾರ 07.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 113
Digital Varthe Kannada Daily
Volume 01 - Issue 113
Wednesday 07.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಕೈ ಮುರಿದು, ಕಣ್ಣಿಗೆ ಚಾಕು ಇರಿದ ಪತ್ನಿ




**ಬೆಂಗಳೂರು**: ಖಾಕಿ ಭಯವಿಲ್ಲದೆ ರೌಡಿಶೀಟರ್‌ಗಳು ಮೇಲಿಂದ ಮೇಲೆ ಅಟ್ಟಹಾಸ ಮೆರೆಯೋದನ್ನು ನಾವು ನೋಡಿದ್ದೇವೆ, ಕೇಳಿದ್ದೇವೆ. ಜೈಲಿಗೆ ಹೋಗಿ ಶಿಕ್ಷೆ ಅನುಭವಿಸಿ ಬಂದರೂ ಕೆಲವರು ಮಾತ್ರ ಬುದ್ಧಿ ಕಲಿಯಲ್ಲ. ಕಾರಾಗೃಹದಿಂದ ಹೊರಬಂದ ಬಳಿಕವೂ ಮತ್ತದೇ ತಮ್ಮ ಹಳೇ ಚಾಳಿ ಮುಂದುವರಿಸುತ್ತಾರೆ. ಕೆಲವೊಮ್ಮೆ ಪೊಲೀಸರ ಕಣ್ಣಿಗೂ ಯಾಮಾರಿಸಿ ಓಡಾಡಿಕೊಂಡು ಇರ್ತಾರೆ. ಇಂತಹುದ್ದೇ ಸಾಲಿಗೆ ಸೇರುವ ರೌಡಿಶೀಟರ್ ಸೈಯದ್ ಅಸ್ಗರ್ ಈಗ ತಾನಾಗಿಯೇ ಪೊಲೀಸರ ಬಳಿ ಓಡೋಡಿ ಬಂದಿದ್ದಾನೆ. ಇದಕ್ಕೆಲ್ಲ ಕಾರಣ ಆತನ ಹೆಂಡತಿ ಅಂದ್ರೆ ನೀವು ನಂಬಲೇ ಬೇಕು.

ಹೌದು, ಪುಂಡರಿಗೆ ಅಂಜದ ಮತ್ತು ಪೊಲೀಸರು ಅಂದ್ರೂ ಭಯ ಪಡದ ರೌಡಿಶೀಟರ್ ಸೈಯದ್ ಅಸ್ಗರ್ ಹೆಂಡತಿ ಅಂದ್ರೆ ಬೆಚ್ಚಿ ಬೀಳ್ತಾನೆ. ಗಾಂಜಾ ಪೆಡ್ಲಿಂಗ್, ಕಳ್ಳತನ, ಕೊಲೆ ಯತ್ನದಂತಹ ಗಂಭೀರ ಆರೋಪ ಹೊಂದಿರೋ ಈತ ಕೇಸ್‌ಗಳಾದ ಪೊಲೀಸರಿಗೂ ಚಳ್ಳೆಹಣ್ಣು ತಿನ್ನಿಸಿ ಎಸ್ಕೇಪ್ ಆಗ್ತಿದ್ದ. ಹೀಗಿರುವಾಗ ಇತ್ತೀಚೆಗಷ್ಟೇ ಜೈಲಿನಿಂದ ಹೊರ ಬಂದಿರೋ ಈತ ಮತ್ತೆ ಪೊಲೀಸ್ ಠಾಣೆ ಮೆಟ್ಟಿಲು ಹತ್ತಿದ್ದಾನೆ. ವಿಶೇಷ ಅಂದ್ರೆ ಪ್ರತಿಬಾರಿ ಆರೋಪಿಯಾಗಿ ಬರ್ತಿದ್ದ ಈತ ಈ ಬಾರಿ ಸಂತ್ರಸ್ತನಾಗಿ ಬಂದಿದ್ದಾನೆ. 2ನೇ ಪತ್ನಿಯನ್ನ ಬಿಡು ಎಂದು ಮೊದಲ ಹೆಂಡತಿ ರೌಡಿಶೀಟರ್ ಶೀಟರ್ ಕೈ ಮುರಿದಿದ್ದಲ್ಲದೆ, ಕಣ್ಣಿಗೆ ಚಾಕು ಕೂಡ ಇರಿದಿದ್ದಾಳೆ. ಹೀಗಾಗಿ ಪತ್ನಿ ವಿರುದ್ಧ ಜೆಜೆ ನಗರ ಠಾಣೆಗೆ ಸೈಯದ್ ಅಸ್ಗರ್ ದೂರು ನೀಡಿದ್ದಾರೆ. ಆತನಿಗೆ ಎರಡನೇ ಪತ್ನಿ ಸಾಥ್ ಕೊಟ್ಟಿದ್ದಾಳೆ.

ರೌಡಿಶೀಟರ್ ಸೈಯದ್ ಅಸ್ಗರ್ ಮೊದಲ ಪತ್ನಿ ಈ ಮೊದಲು ಕೂಡ ವಿಡಿಯೋ ಮಾಡಿ ಬೆದರಿಕೆ ಹಾಕಿದ್ದಳು. ನಿನ್ನ ತಲೆ ಕಡಿಯುತ್ತೇನೆ, ಎರಡು ದಿನ ಕಾಯ್ತಿರು ಎಂದು ವಾರ್ನಿಂಗ್ ಮಾಡಿದ್ದಳು. ಮಚ್ಚು ಮತ್ತು ಚಾಕು ಹಿಡಿದು ವಿಡಿಯೋ ಮಾಡಿದ್ದ ಬೆನ್ನಲ್ಲೇ ಪತಿಯ ಮೇಲೆ ಆಕೆ ಅಟ್ಯಾಕ್ ಮಾಡಿದ್ದಾಳೆ. ಸದ್ಯ ರೌಡಿಶೀಟರ್‌ನಿಂದ ದೂರು ಪಡೆದಿರುವ ಪೊಲೀಸರು, ಘಟನೆ ಸಂಬಂಧ ಕೇಸ್ ದಾಖಲಿಸಿಕೊಂಡಿದ್ದಾರೆ. ಇಷ್ಟು ದಿನ ಬೇರೆಯವರಿಗೆ ಬೆದರಿಕೆ ಹಾಕುತ್ತಿದ್ದ ಸೈಯದ್ ಅಸ್ಗರ್ ಈಗ ಪತ್ನಿ ಬೆದರಿಕೆಗೆ ಅಂಜಿರೋದಿಲ್ಲಿ ಗಮನಾರ್ಹ.

## ಅಪ್ಪನ ಚಟಕ್ಕೆ ಹೋಯ್ತು ಪುತ್ರನ ಪ್ರಾಣಪಕ್ಷಿ



**ಚಿಕ್ಕಮಗಳೂರು:** ಕುಡಿತದ ಚಟ ಓರ್ವ ವ್ಯಕ್ತಿಯನ್ನು ಯಾವ ಹಂತಕ್ಕೆ ತೆಗೆದುಕೊಂಡು ಹೋಗಬಲ್ಲದು ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ. ಎಣ್ಣೆ ವಿಚಾರವಾಗಿ ಶುರುವಾದ ಸಣ್ಣ ಗಲಾಟೆ ಕೊನೆಗೆ ತಂದೆಯಿಂದಲೇ ಮಗನ ಕೊಲೆ ನಡೆದಿದೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಆನೆಗುಂಡಿ ಗ್ರಾಮದಲ್ಲಿ ರವಿವಾರ ಘಟನೆ ನಡೆದಿದೆ. ಮಗ ಪ್ರದೀಪ್(40) ನನ್ನ ತಂದೆ ರಮೇಶ್ ಆಚಾರ್(65) ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ್ದಾರೆ. ಬಾಳೂರು ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

**ನಡೆದದ್ದೇನು?**

ಅಪ್ಪ ಮತ್ತು ಮಗ ಇಬ್ಬರೂ ಕುಡಿತದ ಚಟಕ್ಕೆ ದಾಸರಾಗಿದ್ದರು. ಅದಷ್ಟೇ ಅಲ್ಲದೆ ನಾ ಮೇಲು, ತಾ ಮೇಲು ಎಂದು ಪೈಪೋಟಿಗೆ ಇಳಿಯುತ್ತಿದ್ದರು. ಹೀಗೆ ಸ್ನೇಹಿತರಂತೆ ಒಟ್ಟೊಟ್ಟಿಗೆ ಕೂತು ನನಗೆ ಜಾಸ್ತಿ, ನನಗೆ ಕಮ್ಮಿ ಅಂತ ಹಠಕ್ಕೆ ಬಿದ್ದು ಕುಡಿಯುತ್ತಿದ್ದರು. ಅಪ್ಪ-ಮಗನ ನಡುವಿನ ಎಣ್ಣೆ ವಿಚಾರವಾಗಿ ಆರಂಭವಾದ ಗಲಾಟೆ ಮಗನ ಕೊಲೆಯಲ್ಲಿ ಅಂತ್ಯವಾಗಿದೆ.

ತಂದೆ ರಮೇಶ್, ಎದೆಯೆತ್ತರಕ್ಕೆ ಬೆಳೆದಿದ್ದ ಮಗನಿಗೆ ಬುದ್ಧಿ ಹೇಳಿ ಸರಿ ದಾರಿಗೆ ತರಬೇಕಿತ್ತು. ಆದರೆ ತಾವೇ ಮಗನನ್ನ ಜೊತೆಗೆ ಕೂರಿಸಿಕೊಂಡು ಎಣ್ಣೆ ಕುಡಿಯುತ್ತಿದ್ದರು, ಅಲ್ಲದೆ ಈಗ ಮಗನ ಹೆಣವನ್ನೇ ಉರುಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಬಾಳೂರು ಸಮೀಪದ ಆನೆಗುಂಡಿ ಗ್ರಾಮದ ನಿವಾಸಿ ರಮೇಶ್, ಚಿಕ್ಕ ವಯಸ್ಸಿನಿಂದಲೂ ಕೂಡ ಕುಡಿತದ ಚಟಕ್ಕೆ ದಾಸನಾಗಿದ್ದರು. ತಾವು ಮಾತ್ರ ಕುಡಿದಿದ್ದರೆ ಏನೂ ಆಗ್ತಿರಲಿಲ್ಲ, ಆದರೆ ಜೊತೆಗೆ ತಮ್ಮ ಮಗನನ್ನು ಒಟ್ಟಿಗೆ ಕೂರಿಸಿಕೊಂಡು ಕುಡಿಯುವುದಕ್ಕೆ ಆರಂಭಿಸಿದ್ದರು.

ಅಪ್ಪ-ಮಗ ಇಬ್ಬರೂ ಎಣ್ಣೆ ಕುಡಿದ ಮೇಲೆ ನಿತ್ಯ ಜಗಳ ಮಾಡಿಕೊಳ್ಳುತ್ತಿದ್ದರು. ಕುಡುಕ ತಂದೆ ಮತ್ತು ಮಗನ ಕಾಟಕ್ಕೆ ತಾಯಿ ಮಂಜುಳಾ ಮನೆ ಬಿಟ್ಟು ಹೋಗಿದ್ದರು. ಹೆಣ್ಣು ದಿಕ್ಕಿಲ್ಲದ ಮನೆಯಲ್ಲಿ ಅಪ್ಪ-ಮಗ ಇಬ್ಬರದ್ದೇ ಕಾರು-ಬಾರು. ಹೇಳೋರು, ಕೇಳೋರು ಯಾರು ಇಲ್ಲದ್ದಿದ್ದರಿಂದ ನಿತ್ಯ ಬೆಳಗ್ಗೆಯಿಂದ ಸಂಜೆವರೆಗೂ ಕುಡಿಯೋದನ್ನೇ ಕಾಯಂ ವೃತ್ತಿ ಮಾಡಿಕೊಂಡಿದ್ದರು. ನನಗೆ ಎಣ್ಣೆ ಕಡಿಮೆ, ನಿನಗೆ ಜಾಸ್ತಿ ಅನ್ನೋ ವಿಚಾರಕ್ಕೆ ರವಿವಾರದಂದು ಗಲಾಟೆ ನಡೆದಿದೆ. ಈ ವೇಳೆ ರಮೇಶ್, ಮಗ ಪ್ರದೀಪನನ್ನೇ ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ್ದಾರೆ.

ಮನೆಯಲ್ಲಿ ಅಪ್ಪ-ಮಗ ಇಬ್ಬರೇ ವಾಸವಿದ್ದರು. ಕುಡಿದು ಕ್ಷುಲ್ಲಕ ಕಾರಣಕ್ಕೆ ಆಗಾಗ ಮನೆಯಲ್ಲಿ ಗಲಾಟೆ ಮಾಡುತ್ತಿದ್ದರು ಎನ್ನಲಾಗಿದೆ. ಇವರ ನಿರಂತರ ಜಗಳದ ಕಾಟ ತಡೆಯಲಾರದೆ ಪ್ರದೀಪ್ ತಾಯಿ ಈ ಮೊದಲೇ ಮನೆ ಬಿಟ್ಟು ಹೋಗಿದ್ದರು. ನಿನ್ನೆ ಅಡಕೆ ಮಾರಿ ಬಂದಿದ್ದು, ಅದರಿಂದ ಸಿಕ್ಕ ಹಣದಲ್ಲಿ ರಾತ್ರಿ ಜೊಡೆತ್ತಿನಂತಿದ್ದ ಅಪ್ಪ-ಮಗ ಇಬ್ಬರೂ ಕಂಠಪೂರ್ತಿ ಕುಡಿದಿದ್ದಾರೆ. ಕುಡಿದ ಮತ್ತಿನಲ್ಲಿ ಅಪ್ಪ-ಮಗನ ನಡುವೆ ಗಲಾಟೆ ನಡೆದಿದೆ. ಈ ಸಂದರ್ಭದಲ್ಲಿ, ರಮೇಶ್ ಆಚಾರ್ ತನ್ನ ಮಗ ಪ್ರದೀಪ್‌ನನ್ನು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ್ದಾರೆ.

**ಪೊಲೀಸ್ ವಿಚಾರಣೆ ವೇಳೆ ತಪ್ಪೊಪ್ಪಿಕೊಂಡ ತಂದೆ**

ಇಡೀ ರಾತ್ರಿ ಪ್ರದೀಪ್ ರಕ್ತದ ಮಡುವಿನಲ್ಲಿ ಬಿದ್ದಿದ್ದರಿಂದ ತೀವ್ರ ರಕ್ತಸ್ರಾವವಾಗಿ ಮೃತಪಟ್ಟಿದ್ದಾರೆ. ಬೆಳಿಗ್ಗೆ ರಮೇಶ್, ಮಗನ ಮೃತದೇಹವನ್ನು ಮನೆಯಿಂದ ಹೊರಕ್ಕೆ ಎಳೆದು ತಂದಿದ್ದಾನೆ. ಇದನ್ನು ಗಮನಿಸಿದ ಅಕ್ಕಪಕ್ಕದ ಮನೆಯವರು ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದ ತಕ್ಷಣ ಸ್ಥಳಕ್ಕೆ ಬಂದ ಬಾಳೂರು ಠಾಣೆಯ ಪೊಲೀಸರೇ ಒಂದು ಕ್ಷಣ ಶಾಕ್ ಆಗಿದ್ದರು. ಸ್ಥಳ ಪರಿಶೀಲನೆ ಮಾಡಿದ ಪೊಲೀಸರು ತಂದೆ ರಮೇಶ್‌ರನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಎಣ್ಣೆ ವಿಚಾರಕ್ಕೆ ಮಗನ ಕೊಲೆ ಮಾಡಿರುವುದಾಗಿ ರಮೇಶ್ ಒಪ್ಪಿಕೊಂಡಿದ್ದಾರೆ.

'ಹಿರಿಯಕ್ಕನ ಚಾಳಿ ಮನೆಮಂದಿಗೆಲ್ಲಾ' ಎಂಬ ಮಾತಿನಂತೆ ಮಗನನ್ನು ಚೆನ್ನಾಗಿ ಬೆಳೆಸಿ ಬುದ್ಧಿವಂತನನ್ನಾಗಿ ಮಾಡಬೇಕಿದ್ದ ಅಪ್ಪನೇ ತನ್ನ ಜೊತೆಗೆ ಕೂರಿಸಿಕೊಂಡು ಕುಡಿಯೋದನ್ನ ಕಲಿಸಿ, ಇದೀಗ ತಾವೇ ತಮ್ಮ ಮಗನನ್ನ ಕೊಲೆ ಮಾಡಿರುವುದು ಮಾತ್ರ ದುರಂತವೇ ಸರಿ.

## ಸಾಮಾಜಿಕ ವ್ಯವಸ್ಥೆಯ ಬಗ್ಗೆ ತಿಳಿದುಕೊಳ್ಳುವುದೇ ನಿಜವಾದ ಶಿಕ್ಷಣ:ಮುಖ್ಯಮಂತ್ರಿ ಸಿದ್ದರಾಮಯ್ಯ



ಡಾ|| ಕೆ ಶಿವಕುಮಾರ್ ಅಭಿನಂದನಾ ಸಮಿತಿ ಮತ್ತು ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಮೈಸೂರು ವಿಶ್ವವಿದ್ಯಾನಿಲಯದ ಮಾನಸ ಗಂಗೋತ್ರಿಯ ಸೆನೆಟ್ ಭವನ ದಲ್ಲಿ ಆಯೋಜಿಸಲಾಗಿದ್ದ ನೂತನ ವಿಧಾನ ಪರಿಷತ್ ಸದಸ್ಯರಾದ ಡಾ || ಕೆ ಶಿವಕುಮಾರ್ ರವರಿಗೆ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು.

**ಗುಲಾಮಗಿರಿಯ ಮನಸ್ಥಿತಿ ಕಿತ್ತೊಗೆಯಬೇಕು**

ಶಿವಕುಮಾರ್ ಅವರು ಸಾಮಾಜಿಕ ವ್ಯವಸ್ಥೆಯ ಬಗ್ಗೆ ಬಹಳಷ್ಟು ತಿಳಿದುಕೊಂಡಿದ್ದಾರೆ. ಜಾತಿ ಮತ್ತು ಚಾತುರ್ವರ್ಣ ವ್ಯವಸ್ಥೆಗೆ ಪರಿಹಾರಗಳನ್ನು ಕಂಡುಕೊಳ್ಳಬೇಕು. ಇವುಗಳನ್ನು ತಿಳಿದುಕೊಳ್ಳದೆ ಹೋದರೆ ವೈಚಾರಿಕ, ವೈಜ್ಞಾನಿಕ, ಐತಿಹಾಸಿಕ ಜ್ಞಾನ ಪಡೆದುಕೊಳ್ಳಲಾಗುವುದಿಲ್ಲ. ವೈಚಾರಿಕ, ವೈಜ್ಞಾನಿಕ ಶಿಕ್ಷಣ ಸಿಗದೇ ಹೋದರೆ ಸಮಾಜವನ್ನು ಅರ್ಥ ಮಾಡಿಕೊಳ್ಳಲು ಸಾಧ್ಯವಿಲ್ಲ. ಸಮಾಜದಲ್ಲಿರುವ ಕಂದಾಚಾರ ಹಾಗೂ ಮೌಢ್ಯಗಳಿಗೆ ದಾಸರಾಗುತ್ತೇವೆ ಎಂದರು. ಶತಶತಮಾನಗಳಿಂದ ಅಸ್ಪೃಶ್ಯತೆ ಹಾಗೂ ಜಾತಿಯ ಕಾರಣಗಳಿಂದ ಗುಲಾಮಗಿರಿಯ ಮನಸ್ಥಿತಿ ನಮ್ಮಲ್ಲಿ ಮನೆ ಮಾಡಿದೆ, ಇದನ್ನು ಕಿತ್ತೊಗೆಯಬೇಕು ಎಂದರು.

ಸಾಹೇಬ್ ಅಂಬೇಡ್ಕರ್, ಮಹಾತ್ಮಾ ಗಾಂಧಿಯವರ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ದಲಿತರು ಪತ್ರಕರ್ತರಾಗುವುದು ಬಹಳ ಅಪರೂಪ. ಬಾಬಾ ಸಾಹೇಬ್ ಅಂಬೇಡ್ಕರ್, ಮಹಾತ್ಮಾ ಗಾಂಧಿಯವರು ಪತ್ರಕರ್ತರಾಗಿದ್ದರು. ಎಲ್ಲರೂ ಅವರಂತಾಗಲು ಸಾಧ್ಯವಿಲ್ಲ ಆದರೆ ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಅದನ್ನು ಶಿವಕುಮಾರ್ ಅವರು ಮಾಡಿಕೊಂಡು ಬಂದಿದ್ದಾರೆ ಎಂದರು. ಸಾಮಾಜಿಕ ವ್ಯವಸ್ಥೆಗಳ ಬಗ್ಗೆ ಚಿಂತಿಸಿ ಪರಿಹಾರಗಳನ್ನು ಹುಡುಕುವ ಕೆಲಸವನ್ನು ಪತ್ರಕರ್ತರಾಗಿ ಶಿವಕುಮಾರ್ ಸದಾ ಮಾಡಿದ್ದಾರೆ ಎಂದರು.

ಅವಕಾಶಗಳಿಂದ ವಂಚಿತರಾದವರ ಪರವಾಗಿ ಶಿವಕುಮಾರ್ ಕೆಲಸ ಮಾಡಲಿ ದಲಿತರ ಪರವಾಗಿ ವಿಧಾನ ಪರಿಷತ್ ನಲ್ಲಿ ಶಿವಕುಮಾರ್ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿಗಳು ಸಲಹೆ ನೀಡಿದರು. ಧ್ವನಿಯಿಲ್ಲದವರ , ಅವಕಾಶಗಳಿಂದ ವಂಚಿತರಾದವ ಪರವಾಗಿ ಶಿವಕುಮಾರ್ ಕೆಲಸ ಮಾಡಲಿ ಎಂದರು

**ಎಸ್.ಸಿ ಎಸ್ ಪಿ/ ಟಿಎಸ್‌ಪಿ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿ ಮಾಡಲಿ**

ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದು ಇಷ್ಟು ವರ್ಷಗಳಾದರೂ ಎಸ್.ಸಿ ಎಸ್ ಪಿ/ ಟಿಎಸ್‌ಪಿ ಯೋಜನೆಯನ್ನು ರೂಪಿಸಿಲ್ಲ. ಬಡ್ತಿಯಲ್ಲಿ ಮೀಸಲಾತಿಯನ್ನು ಅಸಾಂವಿಧಾನಿಕ ಎಂದು ಸುಪ್ರೀಂ ಕೋರ್ಟ್ ಹೇಳಿದ್ದರೂ, ರಾಜ್ಯದಲ್ಲಿ ಸಮಿತಿ ರಚಿಸಿ ವರದಿಯನ್ನು ಜಾರಿ ಮಾಡಲಾಯಿತು. ಊರ್ಜಿತವೂ ಆಯಿತು. ಕೇಂದ್ರ ಸರ್ಕಾರ ಏಕೆ ಇದನ್ನು ಜಾರಿ ಮಾಡಬಾರದು ಎಂದು ಪ್ರಶ್ನಿಸಿದರು. ದಲಿತ ಸಮುದಾಯಕ್ಕೆ ಸೇರಿದವರೇ ಇದರ ವಿರುದ್ಧವಾಗಿ ವಾದ ಮಾಡುವುದು ಇದೆ ಎಂದರು.

MNREGA ಯೋಜನೆಯನ್ನು ಬದಲಾಯಿಸಿ ವಿಬಿ ಜಿ ರಾಮ್ ಜಿ ಎಂದು ಹೆಸರಿಸಿದ್ದಾರೆ. ನಮ್ಮಲ್ಲಿ ಶೇ. 17% ಎಸ್.ಸಿ ಹಾಗೂ ಶೇ. 11% ಎಸ್ ಟಿ ಸಮುದಾಯದವರಿದ್ದರೂ ಈ ಬಗ್ಗೆ ಮಾತನಾಡಿಲ್ಲ ಎಂದರು.

ಜಿಎಸ್ ಟಿ ಜಾರಿ ಮಾಡಿದ ಕೇಂದ್ರ ಸರ್ಕಾರ ಆರು ಸಾವಿರ ಕೋಟಿಗಳನ್ನು ರಾಜ್ಯಕ್ಕೆ ಕಡಿಮೆ ಮಾಡಿದೆ. MGREGA ಯೋಜನೆಯಡಿ ಕಳೆದ 20 ವರ್ಷಗಳಿಂದ ಕೇಂದ್ರ ಸರ್ಕಾರವೇ ಅನುದಾನ ನೀಡುತ್ತಿತ್ತು. ಈಗ 60:40 ಅನುಪಾತ ನಿಗದಿ ಮಾಡಲಾಗಿದೆ. ಶೇ. 40% ರಾಜ್ಯ ಸರ್ಕಾರ ಭರಿಸಬೇಕಿದ್ದು ಸುಮಾರು 2500 ಕೋಟಿ ನಷ್ಟವಾಗುತ್ತದೆ ಎಂದರು.

ರಾಜಕೀಯ ಸ್ವಾತಂತ್ರ್ಯ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ವಾತಂತ್ರ್ಯದ ಮೇಲೆ ನಿಂತಿದೆ ರಾಜಕೀಯ ಸ್ವಾತಂತ್ರ್ಯ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ವಾತಂತ್ರ್ಯದ ಮೇಲೆ ನಿಂತಿದೆ. ಎಲ್ಲರಿಗೂ ಇದು ದೊರೆಯುವವರೆಗೆ ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗುವುದಿಲ್ಲ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ವಾವಲಂಬನೆ ಅಗತ್ಯ ಎಂದು ಹೇಳಿದರು. ಅಸಮಾನತೆ ಕಡಿಮೆ ಮಾಡಲೆಂದೇ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ ಎಂದು ಮುಖ್ಯಮಂತ್ರಿಗಳು ಹೇಳಿದರು.

ಉತ್ಪಾದನಾ ಚಟುವಟಿಕೆ ಗಳಲ್ಲಿ ಎಲ್ಲರೂ ಭಾಗವಹಿಸಿ ಬಂದದ್ದನ್ನು ಎಲ್ಲರೂ ಹಂಚಿ ಕೊಳ್ಳುವುದೇ ಕಾಯಕ ಮತ್ತು ದಾಸೋಹದ ತತ್ವ ಎಂದರು.


ಮೈಸೂರು ವಿಶ್ವವಿದ್ಯಾಲಯಕ್ಕೆ ವಿಶೇಷ ಗಮನ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ ಮುಖ್ಯಮಂತ್ರಿಗಳು ಮೈಸೂರು ವಿಶ್ವವಿದ್ಯಾಲಯದ ನಿವೃತ್ತ ನೌಕರರ ಪಿಂಚಣಿ ನೀಡಲು ಅನುದಾನ ಬಿಡುಗಡೆ ಮಾಡಿದೆ. ಮೈಸೂರು ವಿವಿ ಸರಿಪಡಿಸಲು ವಿಶೇಷ ಗಮನ ಹರಿಸಿ, ಕ್ರಮ ವಹಿಸಲಾಗುವುದು ಎಂದರು.

ಸಚಿವರಾದ ಹೆಚ್ .ಸಿ. ಮಹದೇವಪ್ಪ, ಕೆ.ವೆಂಕಟೇಶ್, ಶಾಸಕ ತನ್ವೀರ್ ಸೇಠ್, ಹಿರಿಯ ಪತ್ರಕರ್ತ ಕೃಷ್ಣಪ್ರಸಾದ್, ಶಾಸಕರಾದ ಎ. ಆರ್. ಕೃಷ್ಣಮೂರ್ತಿ,ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ರವಿಶಂಕರ್, ಡಾ: ತಿಮ್ಮಯ್ಯ, ಬೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ, ದಲಿತ ಮುಖಂಡ ಹರಿಹರ ಆನಂದ ಸ್ವಾಮಿ ಮೊದಲಾದವರು ಉಪಸ್ಥಿತರಿದ್ದರು.

## ಅಮೆರಿಕದಲ್ಲಿ ಭಾರತೀಯ ಯುವತಿಯ ನಿಗೂಢ ಸಾವು



**ನ್ಯೂಯಾರ್ಕ್**: ಅಮೆರಿಕದಲ್ಲಿ ವಾಸಿಸುತ್ತಿದ್ದ 27 ವರ್ಷದ ಭಾರತೀಯ ಯುವತಿಯಾದ ನಿಕಿತಾ ರಾವ್ ಗೋಡಿಶಾಲ ಎಂಬಾಕೆಯನ್ನು ಮೇರಿಲ್ಯಾಂಡ್‌ನಲ್ಲಿರುವ ತನ್ನ ಮಾಜಿ ಪ್ರಿಯಕರನ ಅಪಾರ್ಟ್‌ಮೆಂಟ್‌ನಲ್ಲಿ ಶವವಾಗಿ ಪತ್ತೆಯಾಗಿದ್ದಾಳೆ. ಪೊಲೀಸರು ಆಕೆಯ ಮಾಜಿ ಪ್ರೇಮಿಯನ್ನೇ ಪ್ರಮುಖ ಶಂಕಿತ ಎಂದು ಹೆಸರಿಸಿದ್ದಾರೆ. ಆತ ಅಮೆರಿಕ (United States) ಬಿಟ್ಟು ಭಾರತಕ್ಕೆ ಪರಾರಿಯಾಗಿದ್ದಾನೆ ಎನ್ನಲಾಗಿದೆ. ನಿಕಿತಾ ಗೋಡಿಶಾಲ ಜನವರಿ 2ರಂದು ನಾಪತ್ತೆಯಾಗಿದ್ದಳು. ಮರುದಿನ ಆಕೆಯ ಶವ ಪತ್ತೆಯಾಗಿತ್ತು. ಆಕೆಯ ಸಾವಿನ ನಂತರ ಆಕೆಯ ಮಾಜಿ ಪ್ರಿಯಕರನಾದ 27 ವರ್ಷದ ಅರ್ಜುನ್ ಶರ್ಮಾ ಕಾಣೆಯಾಗಿದ್ದಾನೆ. ಮೇರಿಲ್ಯಾಂಡ್‌ನ ಹೊವಾರ್ಡ್ ಕೌಂಟಿಯಲ್ಲಿರುವ ಅರ್ಜುನ್‌ನ ಅಪಾರ್ಟ್‌ಮೆಂಟ್‌ನಲ್ಲಿಯೇ ಆಕೆ ಸಾವನ್ನಪ್ಪಿದ್ದಾಳೆ.



ಅರ್ಜುನ್ ಶರ್ಮಾ ಭಾರತಕ್ಕೆ ಮರಳಿದ್ದಾನೆ ಎಂದು ಪೊಲೀಸ್ ವರದಿ ತಿಳಿಸಿದೆ. ಜನವರಿ 3ರಂದು ಹೊವಾರ್ಡ್ ಕೌಂಟಿ ಪೊಲೀಸರು ಅರ್ಜುನ್‌ನ ಅಪಾರ್ಟ್‌ಮೆಂಟ್‌ನಿಂದ ನಿಕಿತಾಳ ಶವವನ್ನು ವಶಪಡಿಸಿಕೊಂಡಿದ್ದರು. ನಿಕಿತಾ ಕಾಣೆಯಾಗಿರುವ ವಿಷಯ ತಿಳಿಯುತ್ತಿದ್ದಂತೆ ಪೊಲೀಸರು ಅರ್ಜುನ್‌ನನ್ನು ವಿಚಾರಣೆ ನಡೆಸಿದ್ದರು. ಆಗ ಆತ ಹೊಸ ವರ್ಷದಂದು ತಾನು ಕೊನೆಯ ಬಾರಿ ಆಕೆಯನ್ನು ತನ್ನದೇ ಫ್ಲಾಟ್‌ನಲ್ಲಿ ನೋಡಿದ್ದಾಗಿ ಹೇಳಿದ್ದ. ಮತ್ತೆ ಆತನನ್ನು ವಿಚಾರಣೆ ನಡೆಸಬೇಕೆನ್ನುವಷ್ಟರಲ್ಲಿ ಆತ ಭಾರತಕ್ಕೆ ಹಾರಿದ್ದ.

ಇದರಿಂದ ಅನುಮಾನಗೊಂಡ ಪೊಲೀಸರು ಆತನ ಫ್ಲಾಟ್ ಪರಿಶೀಲಿಸಿದಾಗ ಅಲ್ಲಿ ಚಾಕುವಿನಿಂದ ಇರಿತಕ್ಕೊಳಗಾದ ಗಾಯಗಳಿರುವ ನಿಕಿತಾಳ ಶವ ಪತ್ತೆಯಾಗಿತ್ತು. ತಕ್ಷಣ ಪೊಲೀಸರು ಅರ್ಜುನ್ ವಿರುದ್ಧ ಬಂಧನ ವಾರೆಂಟ್ ಹೊರಡಿಸಿದ್ದರು. ಅಮೆರಿಕದ ತನಿಖಾಧಿಕಾರಿಗಳು ಅರ್ಜುನ್ ಶರ್ಮಾ ವಾಸಿಸುತ್ತಿದ್ದ ಬಾಡಿಗೆ ಅಪಾರ್ಟ್ಮೆಂಟ್‌ನ ಬಾಗಿಲುಗಳನ್ನು ಮುರಿದು ಆ ಯುವತಿಯ ಶವವನ್ನು ವಶಕ್ಕೆ ಪಡೆದರು. ಆಕೆಯನ್ನು ಹಲವಾರು ಬಾರಿ ಇರಿದು ಕೊಲ್ಲಲಾಗಿತ್ತು.

**ನಿಕಿತಾ ಗೋಡಿಶಾಲ ಯಾರು?:**

ಭಾರತದ ಜವಾಹರಲಾಲ್ ನೆಹರು ತಾಂತ್ರಿಕ ವಿಶ್ವವಿದ್ಯಾಲಯದಿಂದ ನಿಕಿತಾ ಫಾರ್ಮಸಿ ಪದವಿಯನ್ನು ಪಡೆದಿದ್ದಾಳೆ. ಆಕೆ ಬಾಲ್ಟಿಮೋರ್ ಕೌಂಟಿಯ ಮೇರಿಲ್ಯಾಂಡ್ ವಿಶ್ವವಿದ್ಯಾಲಯದಿಂದ ಆರೋಗ್ಯ ಐಟಿಯಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆಯಲು ಅಮೆರಿಕಕ್ಕೆ ಹೋಗಿದ್ದಳು. ಆಕೆ ವೇಡಾ ಹೆಲ್ತ್‌ನಲ್ಲಿ ಡೇಟಾ ಮತ್ತು ಸ್ಟ್ರಾಟಜಿ ವಿಶ್ಲೇಷಕಳಾಗಿ ಕೆಲಸ ಮಾಡುತ್ತಿದ್ದಳು. ಆಕೆ ಇಂಗ್ಲಿಷ್, ಹಿಂದಿ ಮತ್ತು ತೆಲುಗು ಭಾಷೆಗಳನ್ನು ಮಾತನಾಡುತ್ತಿದ್ದಳು

## ಪ್ರಯಾಣಿಕರ ಗಮನಕ್ಕೆ: ಮೆಜೆಸ್ಟಿಕ್-ಮಲ್ಲೇಶ್ವರಂ ರಸ್ತೆ 3 ತಿಂಗಳು ಬಂದ್



**ಬೆಂಗಳೂರು:** ಮೆಜೆಸ್ಟಿಕ್‌ನಿಂದ ಮಲ್ಲೇಶ್ವರದ ಮಂತ್ರಿ ಮಾಲ್‌ವರೆಗಿನ ಪ್ರಮುಖ ರಸ್ತೆ ಮುಂದಿನ ಮೂರು ತಿಂಗಳು ಸಂಪೂರ್ಣವಾಗಿ ಬಂದ್ ಆಗಲಿದೆ. ಬೆಂಗಳೂರು ಮಹಾನಗರ ಪಾಲಿಕೆ (BBMP) ಹಾಗೂ ಬಿ-ಸ್ಮೈಲ್ ಯೋಜನೆಯಡಿ ಈ ಮಾರ್ಗದಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೊಳ್ಳಲಾಗಿದ್ದು, ಈಗಾಗಲೇ ಕಾಮಗಾರಿ ಆರಂಭವಾಗಿದೆ.

ಮೆಜೆಸ್ಟಿಕ್‌ನಿಂದ ಮಲ್ಲೇಶ್ವರಂಗೆ ಸಂಪರ್ಕ ಕಲ್ಪಿಸುವ ಈ ರಸ್ತೆ ದೈನಂದಿನ ಸಾವಿರಾರು ವಾಹನಗಳ ಓಡಾಟಕ್ಕೆ ಪ್ರಮುಖ ಮಾರ್ಗವಾಗಿದ್ದು, ರಸ್ತೆ ಬಂದ್‌ನಿಂದಾಗಿ ಸಾರ್ವಜನಿಕರು ಮತ್ತು ವಾಹನ ಸವಾರರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಬಸ್‌ಗಳು, ಕಾರುಗಳು, ದ್ವಿಚಕ್ರ ವಾಹನಗಳು ಸೇರಿದಂತೆ ಸರಕು ಸಾಗಣೆ ವಾಹನಗಳಿಗೂ ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ರಸ್ತೆ ಬಂದ್ ಹಿನ್ನೆಲೆಯಲ್ಲಿ ಮೆಜೆಸ್ಟಿಕ್‌ನಿಂದ ಮಲ್ಲೇಶ್ವರಂಗೆ ತೆರಳುವ ವಾಹನಗಳು ಓಕುಳಿಪುರಂ ಅಂಡರ್ ಪಾಸ್, ಸುಜಾತ್ ಸರ್ಕಲ್ ಮಾರ್ಗವಾಗಿ ಸಂಚರಿಸಬೇಕಾಗಿದೆ. ಇದರಿಂದಾಗಿ ಈಗಾಗಲೇ ವಾಹನ ದಟ್ಟಣೆ ಹೆಚ್ಚಿರುವ ಮೆಜೆಸ್ಟಿಕ್ ಸುತ್ತಮುತ್ತ ಹಾಗೂ ಸುಜಾತ್ ಸರ್ಕಲ್ ಪ್ರದೇಶದಲ್ಲಿ ಟ್ರಾಫಿಕ್ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಬೆಳಿಗ್ಗೆ ಮತ್ತು ಸಂಜೆ ಪೀಕ್ ಅವಧಿಯಲ್ಲಿ ವಾಹನ ಸವಾರರು ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ.

ಹಿಂದೆ ಮೆಜೆಸ್ಟಿಕ್‌ನಿಂದ ಮಂತ್ರಿ ಮಾಲ್ ಮಾರ್ಗವಾಗಿ ಕೇವಲ 10 ನಿಮಿಷಗಳಲ್ಲಿ ಮಲ್ಲೇಶ್ವರಂ ತಲುಪಬಹುದಿತ್ತು. ಆದರೆ ಈಗ ರಸ್ತೆ ಬಂದ್ ಆಗಿರುವ ಕಾರಣ ಪೀಕ್ ಅವಧಿಯಲ್ಲಿ 30 ನಿಮಿಷದಿಂದ ಒಂದು ಗಂಟೆಯವರೆಗೂ ಸಮಯ ಬೇಕಾಗುತ್ತಿದೆ. ಇದರಿಂದ ಕಚೇರಿ ನೌಕರರು, ವಿದ್ಯಾರ್ಥಿಗಳು ಹಾಗೂ ವ್ಯಾಪಾರಸ್ಥರು ತೀವ್ರ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ವೈಟ್ ಟಾಪಿಂಗ್ ಕಾಮಗಾರಿ ನಗರದ ರಸ್ತೆಗಳ ಗುಣಮಟ್ಟ ಹೆಚ್ಚಿಸಲು, ದೀರ್ಘಕಾಲ ಬಾಳಿಕೆ ಬರಲು ಮತ್ತು ಮಳೆಗಾಲದಲ್ಲಿ ರಸ್ತೆ ಹಾಳಾಗುವುದನ್ನು ತಡೆಯಲು ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ ಪರ್ಯಾಯ ಮಾರ್ಗಗಳಲ್ಲಿ ಸೂಕ್ತ ಸಂಚಾರ ವ್ಯವಸ್ಥೆ ಕಲ್ಪಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಕೆಲವರು ವಾಹನ ಸವಾರರು, "ವೈಟ್ ಟಾಪಿಂಗ್ ಅವಶ್ಯಕವೇ ಸರಿ, ಆದರೆ ಒಂದು ಮುಖ್ಯ ರಸ್ತೆಯನ್ನು ಮೂರು ತಿಂಗಳು ಬಂದ್ ಮಾಡುವುದು ಸರಿಯಲ್ಲ. ಹಂತ ಹಂತವಾಗಿ ಕಾಮಗಾರಿ ಮಾಡಿದ್ದರೆ ಸಮಸ್ಯೆ ಕಡಿಮೆಯಾಗುತ್ತಿತ್ತು" ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇನ್ನು ಕೆಲವರು ಟ್ರಾಫಿಕ್ ಪೊಲೀಸ್ ಹಾಗೂ ಬಿಬಿಎಂಪಿ ಅಧಿಕಾರಿಗಳು ಸ್ಥಳದಲ್ಲೇ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಟ್ರಾಫಿಕ್ ಪೊಲೀಸ್ ಇಲಾಖೆ ಕೂಡ ರಸ್ತೆ ಬಂದ್ ಹಿನ್ನೆಲೆಯಲ್ಲಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗುವುದು, ಸೂಚನಾ ಫಲಕಗಳನ್ನು ಅಳವಡಿಸಲಾಗುವುದು ಮತ್ತು ವಾಹನ ಸಂಚಾರ ಸುಗಮವಾಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ.

ಒಟ್ಟಾರೆ, ಮೆಜೆಸ್ಟಿಕ್-ಮಲ್ಲೇಶ್ವರಂ ರಸ್ತೆ ಬಂದ್ ನಗರ ಸಂಚಾರದ ಮೇಲೆ ದೊಡ್ಡ ಪರಿಣಾಮ ಬೀರುತ್ತಿದ್ದು, ಮುಂದಿನ ಮೂರು ತಿಂಗಳು ಸಾರ್ವಜನಿಕರು ಹೆಚ್ಚಿನ ಸಹನೆ ವಹಿಸಬೇಕಾದ ಅನಿವಾರ್ಯತೆ ಎದುರಾಗಿದೆ.

## ವಿಶೇಷಚೇತನ ಮಗನಿಗೇ ವಿಷ ಹಾಕಿದ ತಂದೆ





**ಬೆಂಗಳೂರು**: ಹೆತ್ತ ಮಕ್ಕಳನ್ನು ಸಾಕಲು ತಂದೆ-ತಾಯಿ ಕಷ್ಟ ಪಟ್ಟು ದುಡಿಯುತ್ತಾರೆ. ತಮಗೆಷ್ಟೇ ತೊಂದರೆಗಳಿದ್ದರೂ ಮಕ್ಕಳ ಮುಖ ನೋಡಿಕೊಂಡು ನೋವು ನುಂಗಿಕೊಂಡಿರುತ್ತಾರೆ. ಆದರೆ ಇಲ್ಲೋರ್ವ ಪಾಪಿ ತಂದೆ, ಚಿಕಿತ್ಸೆಗೆ ಹಣವಿಲ್ಲದ ಕಾರಣ ಮಗನಿಗೇ ವಿಷ ಹಾಕಿರುವ ಅಮಾನವೀಯ ಘಟನೆ ಬೆಂಗಳೂರಲ್ಲಿ ನಡೆದಿದೆ. ವಿಶೇಷ ಚೇತನ ಮಗನ ಚಿಕಿತ್ಸೆಗಾಗಿ ಅಲೆದು ಬೇಸತ್ತಿದ್ದ ತಂದೆ, ಈ ಕುಕೃತ್ಯವೆಸಗಿದ್ದು, ಮಗು ಸಾವು-ಬದುಕಿನ ನಡುವೆ ಹೋರಾಡುತ್ತಿದೆ.

**ಮಗುವಿನ ಸ್ಥಿತಿ ಗಂಭೀರ**

ಬಾಗಲೂರು ನಿವಾಸಿಗಳಾದ ಸತ್ಯ ಮತ್ತು ಮುನಿಕೃಷ್ಣ ದಂಪತಿಯ ಮಗ ಜೋಯಲ್ ಹುಟ್ಟಿನಿಂದಲೇ ಗಂಭೀರ ಆರೋಗ್ಯ ಸಮಸ್ಯೆಗಳು ಹಾಗೂ ವಿಶೇಷ ಚೇತನತೆಯಿಂದ ಬಳಲುತ್ತಿದ್ದ. ಮಗುವಿನ ನಿರಂತರ ಚಿಕಿತ್ಸೆ, ಆಸ್ಪತ್ರೆಗಳ ಓಡಾಟ ಮತ್ತು ಹೆಚ್ಚುತ್ತಿರುವ ಖರ್ಚಿನಿಂದ ಮಾನಸಿಕವಾಗಿ ಕುಗ್ಗಿದ್ದ ತಂದೆ ಮುನಿಕೃಷ್ಣ ಈ ಕೃತ್ಯ ಎಸಗಿದ್ದಾನೆ.

ಘಟನೆ ತಡವಾಗಿ ಬಹಿರಂಗವಾಗಿದೆ. ಮಗು ಬಾಯಲ್ಲಿ ನೊರೆ ಕಂಡು ತಾಯಿ ಹಾಗೂ ಅಜ್ಜಿ ಗಾಬರಿ ಆಗಿದ್ದಾರೆ. ಕೂಡಲೇ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸುತ್ತಿದ್ದಾರೆ. ಸದ್ಯ ಮಗು ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆಯಲ್ಲಿ ವೆಂಟಿಲೇಟರ್ ಸಹಾಯದೊಂದಿಗೆ ಚಿಕಿತ್ಸೆ ಪಡೆಯುತ್ತಿದ್ದು ಸ್ಥಿತಿ ಗಂಭೀರವಾಗಿದೆ. ಘಟನೆ ಬಗ್ಗೆ ಪತ್ನಿ ಸತ್ಯ ನೀಡಿರುವ ದೂರಿನ ಅನ್ವಯ ಮುನಿಕೃಷ್ಣ ವಿರುದ್ಧ ದೂರು ದಾಖಲಾಗಿದೆ.

**ಮಗನಿಗೆ ಕೀಟನಾಶಕ ಕುಡಿಸಿದ್ದನ್ನು ಒಪ್ಪಿಕೊಂಡ ತಂದೆ**

ಅಮಾನವೀಯ ಕೃತ್ಯದ ಬಳಿಕ ಟಿವಿ9 ಜೊತೆ ಮಾತನಾಡಿರುವ ತಂದೆ ಮುನಿಕೃಷ್ಣ , ವಿಶೇಷಚೇತನನಾದ ನನ್ನ ಮಗನ ಚಿಕಿತ್ಸೆಗೆ ಹಣವಿಲ್ಲ. ನನಗೆ ಯಾರು ಸಪೋರ್ಟ್ ಮಾಡಿಲ್ಲ. ಇದಲ್ಲದೇ ವೈದ್ಯರೂ ಕೈಚೆಲ್ಲಿದ್ದರು. ನಾನು ಕೆಲಸಕ್ಕೆ ಹೋಗುವ ಕಡೆ ಗಿಡಗಳಿಗೆ ಔಷಧ ಹೊಡೆಯುತ್ತಿದ್ದರು. ಅವರ ಬಳಿ 50 ಮಿ.ಲಿ ಕಿಟನಾಶಕ ತಂದು ಮಗನ ಆಹಾರಕ್ಕೆ ಹಾಕಿದ್ದೆ. ಆತನ ಚಿಕಿತ್ಸೆಗೆ ಸಾಕಷ್ಟು ಸಾಲ ಮಾಡಿದ್ದೇನೆ. ಹೀಗಾಗಿಯೇ ವಿಷ ಹಾಕಿದೆ ಎಂದು ತಪ್ಪೊಪ್ಪಿಕೊಂಡಿದ್ದಾನೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸ್ವದೇಶಿ ಜಾಗರಣ ಮಂಚ್ ಕರ್ನಾಟಕ ಆಯೋಜನೆ



**ಪೀಣ್ಯ ದಾಸರಹಳ್ಳಿ**: ದೇಶದ ಸಣ್ಣ ಉತ್ಪಾದಕರಿಗೆ ಮಾರುಕಟ್ಟೆ ಒದಗಿಸುವುದರ ಜೊತೆಗೆ ಜನರಿಗೆ ಸ್ವದೇಶಿ ವಸ್ತುಗಳ ಪರಿಚಯ ಮಾಡುವ ದೃಷ್ಟಿಯಿಂದ ದೇಶಾದ್ಯಂತ ನೂರಾರು ಸ್ವದೇಶಿ ಮಳಿಗೆಗಳ ಆಯೋಜನೆ ಸ್ವದೇಶಿ ಜಾಗರಣ ಮಂಚ್ ಕರ್ನಾಟಕ ಹಮ್ಮಿಕೊಂಡಿದೆ. ಬಾಗಲಗುಂಟೆಯ ಎಂ.ಇ.ಐ ಆಟದ ಮೈದಾನದಲ್ಲಿ ಜನವರಿ 7 ರಿಂದ 11 ರವರೆಗೆ ಸ್ವದೇಶಿ ಮೇಳ ನಡೆಯಲಿದೆ' ಎಂದು ಮೇಳದ ಗೌರವಾಧ್ಯಕ್ಷ ಮತ್ತು ಶಾಸಕ ಎಸ್. ಮುನಿರಾಜು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈ ಮೇಳಕ್ಕೆ ಆದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷ ನಿರ್ಮಲಾನಂದ ಸ್ವಾಮೀಜಿ ಚಾಲನೆ ನೀಡಿ ಆಶೀರ್ವಚನ ನೀಡುತ್ತಾರೆ. ಖ್ಯಾತ ವಾಗ್ಮಿ ಚಕ್ರವರ್ತಿ ಸೂಲಿಬೆಲೆ ಮುಖ್ಯ ಭಾಷಣ ಮಾಡಲಿದ್ದಾರೆ. ಸಮಾರೋಪ ಸಮಾರಂಭದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವೇದಿಕೆಯ ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಸತೀಶ್,ಅನೇಕ ಗಣ್ಯರು,ಕೈಗಾರಿಕೋದ್ಯಮಿಗಳು ಭಾಗವಹಿಸಲಿದ್ದಾರೆ' ಎಂದರು.

ಜ.7ರಂದು 'ಲೋಕ ಕಲಾ ಸಂಭ್ರಮ' ಸಾಂಸ್ಕೃತಿಕ ಕಾರ್ಯಕ್ರಮ,8ರಂದು ಸೌಂದರ್ಯವರ್ಧಕ ವಸ್ತುಗಳ ತಯಾರಿಕಾ ಶಿಬಿರ, 9ರಂದು 10 ಗಂಟೆಗೆ ಆಯುರ್ವೇದ ಆರೋಗ್ಯ ಶಿಬಿರ ಮತ್ತು ಮಧ್ಯಾಹ್ನ 3 ಗಂಟೆಗೆ ಮಹಿಳಾ ಸಮಾವೇಶ, ಸಂಜೆ 6ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ದಕ್ಷಯಜ್ಞ ಯಕ್ಷಗಾನ ಪ್ರಸಂಗ ನಾಟಕ, ಜ.10ರಂದು ತಾರಸಿ ತೋಟ ಮತ್ತು ಕೈತೋಟ ತರಬೇತಿ ಶಿಬಿರ, ಜ. 11ರಂದು ರಂಗೋಲಿ ಸ್ಪರ್ಧೆ ಮತ್ತು ಕುಟುಂಬ ಪ್ರಬೋಧನ ಕಾರ್ಯಕ್ರಮ, ಸಂಜೆ 7ಕ್ಕೆ ಕಡಬಗೆರೆ ಮುನಿರಾಜು ಅವರ ತಂಡದಿಂದ ಜನಪದ ಸಂಜೆ ಕಾರ್ಯಕ್ರಮ ನಡೆಯಲಿದೆ' ಎಂದು ಎಸ್. ಮುನಿರಾಜು ವಿವರಿಸಿದರು.

ಸ್ವದೇಶಿ ಆಹಾರ ಮಳಿಗೆ, ಮಕ್ಕಳಿಗಾಗಿ ಮನರಂಜನ ಚಟುವಟಿಕೆ, ಮ್ಯಾಜಿಕ್ ಶೋ, ಖಾದಿ ಬಟ್ಟೆಗಳ ಮಳಿಗೆ, ಸಾವಯವ ಕೃಷಿ, ಗಾಣದ ಎಣ್ಣೆಗಳ ಮಳಿಗೆ, ಸಂಸ್ಕಾರ ಭಾರತಿ ಅವರಿಂದ ಪ್ರತಿದಿನ ಮಧ್ಯಾಹ್ನ ಪಂಚಗವ್ಯ ಚಿಕಿತ್ಸಾ ಶಿಬಿರ ಮತ್ತು ಉಚಿತ ಸಲಹೆ, ಸಂಜೆ ಖ್ಯಾತ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ' ಎಂದು ಮಾಹಿತಿ ನೀಡಿದರು.

ಸ್ವದೇಶಿ ಜಾಗರಣ ಮಂಚ್ ಸಂಘಟಕ ಜಗದೀಶ್,' ಸ್ವದೇಶಿ ಮೇಳದಲ್ಲಿ 200ಕ್ಕೂ ಹೆಚ್ಚು ಮಳಿಗೆಗಳು ಭಾಗವಹಿಸಲಿವೆ. 3ಲಕ್ಷಕ್ಕೂ ಅಧಿಕ ಜನರು ಭೇಟಿ ನೀಡಲಿದ್ದಾರೆ. ಮೇಳದಲ್ಲಿ ದೇಶಿ ಉತ್ಪನ್ನಗಳು ಇರಲಿದ್ದು ಪ್ಲಾಸ್ಟಿಕ್ ನಿಷೇಧಿಸಲಾಗಿದೆ' ಎಂದರು.

ಮೇಳದ ಸಂಘಟಕ ಭರತ್ ಸೌಂದರ್ಯ, ಸಹ ಸಂಘಟಕ ಲಕ್ಷ್ಮಿ ವೆಂಕಟೇಶ್, ಸಂಚಾಲಕ ವಸಂತ ಮೂರ್ತಿ, ಆರ್ ಎಸ್ ಎಸ್ ಅಧಿಕಾರಿ ಗಂಗಾಧರ್ ಇದ್ದರು.

# ಅಂದ್ರಹಳ್ಳಿ ವಾರ್ಡಿನಲ್ಲಿ ಬೀದಿ ದೀಪಅಳವಡಿಕೆಗೆ ಕಾಮಗಾರಿಗೆ ಚಾಲನೆ - ಶಾಸಕ ಎಸ್ ಟಿ ಸೋಮಶೇಖರ್




**ಯಶವಂತಪುರ** : ಅಂದ್ರಹಳ್ಳಿ ವಾರ್ಡಿನಲ್ಲಿ ಬೀದಿ ದೀಪ (ಎಲ್ಇಡಿ) ಲೈಟ್ ಅಳವಡಿಕೆಗೆ ಕಾಮಗಾರಿಗೆ ಮಾಜಿ ಸಚಿವ ಹಾಗೂ ಯಶವಂತಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಸ್ ಟಿ ಸೋಮಶೇಖರ್ ಅವರು ಜ್ಯೋತಿ ಬೆಳಗಿಸಿ ಲೈಟ್ ಅಳವಡಿಕೆಗೆ ಕಾಮಗಾರಿಗೆ ಚಾಲನೆ ನೀಡಿದರು.

ನಂತರ ಅವರು ಮಾತನಾಡಿ ಕ್ಷೇತ್ರದಲ್ಲಿ ವಾರ್ಡಿನಲ್ಲಿ ಆಗಿರುವ ಅಭಿವೃದ್ಧಿ ಮತ್ತು ಆಗಬೇಕಾದ ಕಾಮಗಾರಿಗಳು ಪ್ರತಿಯೊಬ್ಬ ಮುಖಂಡರು ವಾರ್ಡ ಅಧ್ಯಕ್ಷರು ಸಮೀಕ್ಷೆ ಮಾಡಿ ಜನರ ಸಮಸ್ಯೆ ತಿಳಿದು ಕೊಳ್ಳಬೇಕು. ಅದಲ್ಲದೆ ಮಾಡಿದ ಅಭಿವೃದ್ಧಿ ಕೆಲಸಗಳು ಪ್ರತಿಯೋಬ್ಬರಿಗೂ ಮನೆ ಮನೆಗಳಿಗೆ ಭೇಟಿ ನೀಡಿ ಮನವರಿಕೆ ಮಾಡಿಕೊಡುವ ಬೇಕು ಎಂದು ಶಾಸಕ ಎಸ್ ಟಿ ಸೋಮಶೇಖರ್ ಅವರು ಮುಖಂಡರಿಗೆ ಮತ್ತು ವಾರ್ಡ ಅಧ್ಯಕ್ಷರಿಗೆ ನಿರ್ದೇಶನ ನೀಡಿದರು. ದೊಡ್ಡಬಿದರಿಕಲ್ಲು ವಾರ್ಡಿನ ಅಧ್ಯಕ್ಷ ಲಿಖಿತ್ ಗೌಡ್ರು ಪ್ರಾಸ್ತಾವಿಕ ಭಾಷಣ ಮಾಡಿದರು. ಗ್ರೇಟರ್ ಬೆಂಗಳೂರು ಪ್ರಭಲ ಆಕಾಂಕ್ಷಿ ಅಭ್ಯರ್ಥಿ ಪ್ರಕಾಶ್ ಟಿ ಸರ್ವರಿಗೂ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ವಾರ್ಡ ಅಧ್ಯಕ್ಷರಾದ ಮುನಿರಾಜು, ಕುಮಾರ್, ಮಾಜಿ ಅಧ್ಯಕ್ಷ ವಿ. ನಾಗರಾಜ್, ಯುವ ಘಟಕದ ಅಧ್ಯಕ್ಷ ಅರುಣ್ ಬೈಲಪ್ಪ , ವಾರ್ಡ ಮಹಿಳಾ ಘಟಕದ ಅಧ್ಯಕ್ಷೆ ಭಾಗ್ಯಮ್ಮ , ಹಿರಿಯ ಮುಖ್ಯಸ್ಥೆ ಮೇರಿಮ್ಮ , ಚಂದ್ರಕಲಾ, ಶೃತಿ ಗೌಡ, ಅಂದ್ರಹಳ್ಳಿ ನಿವಾಸಿಗಳ ಒಕ್ಕಲಿಗರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಮಸ್ತ ನಾಗರಿಕರು ಮಹಿಳೆಯರು ಕಾರ್ಯಕರ್ತರು ಮುಂತಾದವರು ಇದ್ದರು.

# ಗರ್ಭಿಣಿ ಸಾವು: ವರದಕ್ಷಿಣೆ ಬೇಡಿಕೆ ಆರೋಪ





**ಜೈಪುರ**: ದೇಶ ಎಷ್ಟೇ ಮುಂದುವರೆದಿದ್ದರೂ, ಜನರು ಎಷ್ಟೇ ಶಿಕ್ಷಣ ಪಡೆದಿದ್ದರೂ ಸಮಾಜದಲ್ಲಿ ವರದಕ್ಷಿಣೆ(Dow-ry) ಎಂಬುದು ಪಿಡುಗಾಗಿಯೇ ಉಳಿದಿದೆ. ಇನ್ನೂ ಕೂಡ ವರದಕ್ಷಿಣೆಗಾಗಿ ಹೆಣ್ಣುಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯ ನಿಂತಿಲ್ಲ. ರಾಜಸ್ಥಾನದ ಧೋಲ್ಪುರದಲ್ಲಿ ವರದಕ್ಷಿಣೆ ತಂದಿಲ್ಲವೆಂದು ನಾಲ್ಕು ತಿಂಗಳ ಗರ್ಭಿಣಿಯನ್ನೇ ಅತೆತ-ಮಾವ ಕೊಲೆ ಮಾಡಿ ರಹಸ್ಯವಾಗಿ ಅಂತ್ಯ ಸಂಸ್ಕಾರ ನಡೆಸಿರುವ ಘಟನೆ ವರದಿಯಾಗಿದೆ.

ಆರೋಪಿ ಕುಟುಂಬ ಸದಸ್ಯರು ಆಕೆಯ ಪೋಷಕರಿಗೆ ತಿಳಿಸದೆ ಆಕೆಯ ಶವವನ್ನು ಅಂತ್ಯಸಂಸ್ಕಾರ ಮಾಡಿ ಗ್ರಾಮದಿಂದ ಪರಾರಿಯಾಗಿದ್ದಾರೆ. 24 ವರ್ಷದ ಗುಡಿಯಾ ಎಂಬ ಯುವತಿಯನ್ನು ಇಂಚಾಪುರ ಗ್ರಾಮದ ನಿವಾಸಿ ಪಂಕಜ್ ಠಾಕೂರ್ ಎಂಬಾತ ವಿವಾಹವಾಗಿದ್ದಳು.ಶನಿವಾರ ಆಕೆಯ ಅತ್ತೆಯ ಮನೆಯಲ್ಲಿ ಆಕೆಯನ್ನು ಕೊಲೆ ಮಾಡಲಾಗಿದೆ ಎಂದು ಪೋಲೀಸರು ತಿಳಿಸಿದ್ದಾರೆ.

ನಂತರ ಆಕೆಯ ಅತ್ತೆ-ಮಾವಂದಿರು ಆಕೆಯ ದೇಹವನ್ನು ಸಗಣಿಯಿಂದ ಮಾಡಿದ ಚಿತೆಯ ಮೇಲೆ ಇರಿಸಿ, ಆಕೆಯ ಕುಟುಂಬಕ್ಕೆ ತಿಳಿಸದೆ ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿದ್ದಾರೆ. ಗುಡಿಯಾಳ ಅಕ್ಕ ಪೋಷಕರಿಗೆ ಮಾಹಿತಿ ನೀಡಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ. ಮಹಿಳೆಯ ಕುಟುಂಬವರು ಗ್ರಾಮಕ್ಕೆ ಓಡಿ ಬಂದಾಗ, ಆಕೆಯ ಚಿತೆ ಇನ್ನೂ ಉರಿಯುತ್ತಿರುವುದನ್ನು ಕಂಡು ಕುಸಿದು ಕುಳಿತರು. ಅವರು ನೀರಿನಿಂದ ಬೆಂಕಿಯನ್ನು ನಂದಿಸಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದರ

ಹಿರಿಯ ಪೊಲೀಸ್ ಅಧಿಕಾರಿಗಳು ವಿಧಿವಿಜ್ಞಾನ ಪ್ರಯೋಗಾಲಯ (ಎಫ್ಎಸ್ಎಲ್) ತಂಡದೊಂದಿಗೆ ಸ್ಥಳಕ್ಕೆ ಆಗಮಿಸಿದರು. ಚಿತೆಯಿಂದ ಸಾಕ್ಷ್ಯಗಳನ್ನು ಸಂಗ್ರಹಿಸಲಾಯಿತು ಮತ್ತು ಜಿಲ್ಲಾ ಆಸ್ಪತ್ರೆಯ ವೈದ್ಯಕೀಯ ತಂಡವು ಸ್ಥಳದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿತು. ಡಿಎನ್ಎ ವಿಶ್ಲೇಷಣೆಗಾಗಿ ಮಾದರಿಗಳನ್ನು ಸಹ ತೆಗೆದುಕೊಳ್ಳಲಾಗಿದೆ.

ಮನೆಯೊಳಗೆ ರಕ್ತದ ಕಲೆಗಳು ಪತ್ತೆಯಾಗಿದ್ದು , ಕೊಡಲಿ, ಸನಿಕೆ, ಕೋಲುಗಳು ಮತ್ತು ಇತರ ವಸ್ತುಗಳು ಸೇರಿದಂತೆ ಆಯುಧಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಕ್ಷಿಪ್ರವಾಗಿ ಕಾರ್ಯಾಚರಣೆ ನಡೆಸಿದ ಪೊಲೀಸರು, ಆ ರಾತ್ರಿ ನಂತರ ಸಂತ್ರಸ್ತೆಯ ಪತಿ ಪಂಕಜ್ ಠಾಕೂರ್ ಅವರನ್ನು ಬಂಧಿಸಿದ್ದಾರೆ. ಅತ್ತೆ-ಮಾವನ ಕುಟುಂಬದ ಇತರ ಸದಸ್ಯರು ತಲೆಮರೆಸಿಕೊಂಡಿದ್ದು , ಅವರನ್ನು ಪತ್ತೆಹಚ್ಚಲು ಶೋಧ ಕಾರ್ಯಾಚರಣೆ ನಡೆಯುತ್ತಿದೆ.

ಉತ್ತರ ಪ್ರದೇಶದ ಆಗ್ರಾ ಜಿಲ್ಲೆಯ ನಿವಾಸಿಯಾಗಿರುವ ಸಂತ್ರಸ್ತೆಯ ತಂದೆ ದೇವೇಂದ್ರ ಸಿಂಗ್ ಪರ್ಮಾರ್ ತಮ್ಮ ದೂರಿನಲ್ಲಿ, ತಮ್ಮ ಮಗಳನ್ನು ಪಂಕಜ್ ಠಾಕೂರ್ ಅವರೊಂದಿಗೆ ಮೇ 28, 2025 ರಂದು ವಿವಾಹವಾಗಿದ್ದರು ಎಂದು ಹೇಳಿದ್ದಾರೆ. ಮದುವೆಯ ಸಮಯದಲ್ಲಿ 15 ಲಕ್ಷ ರೂಪಾಯಿ ನಗದು, ಬೈಕ್, ಗೃಹೋಪಯೋಗಿ ವಸ್ತುಗಳು ಮತ್ತು ಆಭರಣಗಳನ್ನು ವರದಕ್ಷಿಣೆಯಾಗಿ ನೀಡಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಇದರ ಹೊರತಾಗಿಯೂ, ಅತ್ತೆ-ಮಾವಂದಿರು ಕಾರು, ಚಿನ್ನದ ಸರ ಮತ್ತು ಎಮ್ಮೆ ಸೇರಿದಂತೆ ಹೆಚ್ಚುವರಿ ವರದಕ್ಷಿಣೆಗಾಗಿ ಬೇಡಿಕೆ ಇಟ್ಟಿದ್ದರು ಮತ್ತು ಗುಡಿಯಾಳಿಗೆ ಮಾನಸಿಕ ಕಿರುಕುಳ ಮತ್ತು ದೈಹಿಕ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಲಾಗಿದೆ.

# ಸಚಿವೆ ಹೆಬ್ಬಾಳ್ಕರ್ ಪುತ್ರನ ಕಾರು ಚಾಲಕನಿಗೆ ಚಾಕು ಇರಿತ



**ಬೆಳಗಾವಿ**: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರನ ಕಾರು ಚಾಲಕನಿಗೆ ದುಷ್ಕರ್ಮಿಗಳಿಂದ ಚಾಕು ಇರಿದಿರು ವಂತಹ ಘಟನೆ ಬೆಳಗಾವಿ ನಗರದ ಕ್ಲಬ್ ರಸ್ತೆಯಲ್ಲಿ ನಡೆದಿದೆ. ಬೆಳಗಾವಿ ತಾಲೂಕಿನ ಬೆಳಗುಂದಿ ಗ್ರಾಮದ ನಿವಾಸಿ ಬಸವಂತ ಕಡೋಲ್ಕರ್(32)ಗೆ ಬೈಕ್‌ನಲ್ಲಿ ಬಂದಿದ್ದ ಇಬ್ಬರು ದುಷ್ಕರ್ಮಿಗಳು ಎದೆ, ಭುಜ, ತೊಡೆ ಸೇರಿ 4 ಕಡೆ ಚಾಕುವಿನಿಂದ ಇರಿದು ಪರಾರಿ ಆಗಿದ್ದಾರೆ. ಮೈನಿಂಗ್ ವಿಚಾರಕ್ಕೆ ಹಲ್ಲೆ ಮಾಡಿದ್ದಾರೆ. ಸದ್ಯ ಗಾಯಾಳು ಬಸವಂತರನ್ನು ಬೆಳಗಾವಿ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

**ನಡೆದದ್ದೇನು?**ಬೆಳಗಾವಿ ತಾಲೂಕಿನ ಬೆಳಗುಂದಿ ಗ್ರಾಮದ ನಿವಾಸಿ ಬಸವಂತ ಕಡೋಲ್ಕರ್, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಕಾರು ಚಾಲಕರಾಗಿದ್ದಾರೆ. ಬೆಳಗಾವಿ ನಗರದ ಕ್ಲಬ್ ರಸ್ತೆಯಲ್ಲಿ ಕಾರು ನಿಲ್ಲಿಸಿ ಕೆಳಗೆ ನಿಂತಿದ್ದರು. ಈ ವೇಳೆ ಬೈಕ್‌ನಲ್ಲಿ ಬಂದಿದ್ದ ಇಬ್ಬರು ದುಷ್ಕರ್ಮಿಗಳು ಚಾಕುವಿನಿಂದ ಇರಿದು ಪರಾರಿ ಆಗಿದ್ದಾರೆ. ಹಲ್ಲೆ ಮಾಡಿರುವವರು ಬೆಳಗಾವಿ ತಾಲೂಕಿನ ಗೊಜಗಾ ಮೂಲದವರು ಎನ್ನಲಾಗುತ್ತಿದೆ. ಚಾಕು ಇರಿಯುವ ದೃಶ್ಯ ಸಿಸಿಟಿವಿಯಲ್ಲಿ ಸೆರೆ ಆಗಿದೆ.

ಇನ್ನು ಐಪಿಎಸ್ ಅಧಿಕಾರಿ ರವೀಂದ್ರ ಗಡಾದಿ ಬಸವಂತ ಕಡೋಲ್ಕರ್ ಜೀವ ಉಳಿಸಿದ್ದಾರೆ. ಘಟನೆ ವೇಳೆ ರವೀಂದ್ರ ಗಡಾದಿ ಅವರು ಮನೆಗೆ ಊಟಕ್ಕೆ ಹೋಗುತ್ತಿದ್ದರು. ಗಲಾಟೆ ನೋಡುತ್ತಿದ್ದಂತೆ ಸ್ಥಳಕ್ಕೆ ಹೋಗಿ ದುಷ್ಕರ್ಮಿಗಳಿಂದ ಬಸವಂತನ ಜೀವ ಉಳಿಸಿದ್ದಾರೆ. ಸದ್ಯ ಆಸ್ಪತ್ರೆಗೆ ಡಿಸಿಪಿ, ಎಸಿಪಿ ಹಾಗೂ ಸಚಿವೆ ಲಕ್ಷ್ಮೀ ಪುತ್ರ ಮೃಣಾಲ್ ಭೇಟಿ ಮಾಡಿದ್ದಾರೆ. ಬೆಳಗಾವಿಯ ಕ್ಯಾಂಪ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೃತ್ಯ ನಡೆದಿದೆ.

**ಹಲ್ಲೆಗೊಳಗಾದ ಬಸವಂತ ಹೇಳಿದ್ದಿಷ್ಟು**

ಹಲ್ಲೆಗೊಳಗಾದ ಬಸವಂತ ಮೈನಿಂಗ್ ವಿಚಾರದಲ್ಲಿ ಬಂದು ನನ್ಮೇಲೆ ಹಲ್ಲೆ ಮಾಡಿದ್ದಾರೆ. ಮೈನಿಂಗ್ ವಿಚಾರಕ್ಕೆ ಪದೇಪದೆ ಜಗಳ ತೆಗೆಯುತ್ತಿದ್ದರು. ಇಂದು ಗೋಜಗಾ ಗ್ರಾಮದ ಶಿವಾ ಪೂಜಾರಿ, ಪರಶುರಾಮ ಮತ್ತು ಮೋನಪ್ಪ ಪಾಟೀಲ್ ಬಂದು ನನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಹೇಳಿದ್ದಾರೆ.

# ಪ್ರೀತಿ ವಿಚಾರಕ್ಕೆ ಮಾನಸಿಕ ಒತ್ತಡ: ಅಪ್ರಾಪ್ತ ಬಾಲಕಿ ಆತ್ಮಹತ್ಯೆ



**ನೆಲಮಂಗಲ**: ತಾಲೂಕಿನ ಬೆಂಗಳೂರು ಉತ್ತರ ಭಾಗದ ಅಂಚೇಪಾಳ್ಯ ಪ್ರಕೃತಿ ಲೇಔಟ್‌ನಲ್ಲಿ ಪ್ರೀತಿಯ ವಿಚಾರಕ್ಕೆ ಸಂಬಂಧಿಸಿದ ಮಾನಸಿಕ ಒತ್ತಡದಿಂದ ಅಪ್ರಾಪ್ತ ಬಾಲಕಿಯೊಬ್ಬಳು ಆತ್ಮಹತ್ಯೆಗೆ ಶರಣಾದ ದುರ್ಘಟನೆ ನಡೆದಿದೆ. ಮೃತ ಬಾಲಕಿಯನ್ನು ತೇಜಸ್ವಿನಿ (17) ಎಂದು ಗುರುತಿಸಲಾಗಿದ್ದು, ಪ್ರೀತಿಸುವ ವಿಷಯಕ್ಕೆ ಸಂಬಂಧಿಸಿದಂತೆ ಯುವಕನೊಬ್ಬನಿಂದ ನಿರಂತರ ಕಿರುಕುಳ ಎದುರಿಸುತ್ತಿದ್ದಳು ಎಂಬ ಶಂಕೆ ವ್ಯಕ್ತವಾಗಿದೆ.


ಸ್ಥಳೀಯರ ಮಾಹಿತಿ ಪ್ರಕಾರ, ಇತ್ತೀಚಿನ ದಿನಗಳಲ್ಲಿ ತೇಜಸ್ವಿನಿ ಮನನೊಂದು ಮೌನವಾಗಿರುವುದು ಹಾಗೂ ಆತಂಕ ದಲ್ಲಿರುವುದು ಕಂಡುಬಂದಿತ್ತು. ಯುವಕನಿಂದ ನಿರಂತರವಾಗಿ ಕರೆಗಳು, ಸಂದೇಶಗಳು ಹಾಗೂ ಒತ್ತಡ ಎದುರಾಗುತ್ತಿತ್ತು ಎನ್ನಲಾಗಿದ್ದು , ಇದರಿಂದಾಗಿ ಬಾಲಕಿ ತೀವ್ರ ಮಾನಸಿಕ ಸಂಕಷ್ಟಕ್ಕೆ ಒಳಗಾಗಿದ್ದಾಳೆ ಎಂದು ಕುಟುಂಬಸ್ಥರು ಶಂಕಿಸಿದ್ದಾರೆ. ಇದೇ ಒತ್ತಡ ಆಕೆಯನ್ನು ಅತಿರೇಕದ ನಿರ್ಧಾರಕ್ಕೆ ತಳ್ಳಿರಬಹುದೆಂದು ಹೇಳಲಾಗುತ್ತಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣ ಮಾದನಾಯಕನಹಳ್ಳಿ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಮನೆಯೊಳಗಿನ ಪರಿಸ್ಥಿತಿ, ಸುತ್ತಮುತ್ತಲ ಸಾಕ್ಷ್ಯಗಳು ಹಾಗೂ ಕುಟುಂಬದವರ ಹೇಳಿಕೆಗಳನ್ನು ಸಂಗ್ರಹಿಸಿ ಪ್ರಾಥಮಿಕ ತನಿಖೆ ಕೈಗೊಂಡಿದ್ದಾರೆ. ಬಳಿಕ ಮೃತದೇಹವನ್ನು ಮುಂದಿನ ಕಾನೂನು ಪ್ರಕ್ರಿಯೆಗಾಗಿ ನೆಲ ಮಂಗಲದ ಶವಗಾರಕ್ಕೆ ರವಾನಿಸಲಾಗಿದೆ.

ಈ ಸಂಬಂಧ ಬಾಲಕಿಯ ಪೋಷಕರು, ತಮ್ಮ ಮಗಳು ಯುವಕನ ಕಿರುಕುಳ ಮತ್ತು ಮಾನಸಿಕ ಒತ್ತಡದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಆರೋಪಿಸಿ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಆರೋಪಿತ ಯುವಕನ ಪಾತ್ರ, ಕಿರುಕುಳದ ಸ್ವರೂಪ ಹಾಗೂ ಘಟನೆಗೆ ದಾರಿ ಮಾಡಿದ ಹಿನ್ನೆಲೆಯ ಕುರಿತು ಸವಿಸ್ತಾರ ತನಿಖೆ ಆರಂಭಿಸಿದ್ದಾರೆ.

ಈ ದುರ್ಘಟನೆ ಸ್ಥಳೀಯರಲ್ಲಿ ಆಘಾತ ಮೂಡಿಸಿದ್ದು, ಅಪ್ರಾಪ್ತರ ಮೇಲೆ ಪ್ರೀತಿಯ ಹೆಸರಿನಲ್ಲಿ ನಡೆಯುವ ಒತ್ತಡ ಮತ್ತು ಕಿರುಕುಳದ ಗಂಭೀರ ಪರಿಣಾಮಗಳ ಕುರಿತು ಚರ್ಚೆಗೆ ಕಾರಣವಾಗಿದೆ. ಪೊಲೀಸರು ತನಿಖೆ ಪೂರ್ಣಗೊಳಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

# ಬಾಂಗ್ಲಾದೇಶದಲ್ಲಿ ಮತ್ತೊಬ್ಬ ಹಿಂದೂ ಪತ್ರಕರ್ತನ ಭೀಕರ ಹತ್ಯೆ



**ಢಾಕಾ**: ಬಾಂಗ್ಲಾದೇಶದಲ್ಲಿ ರಾಜಕೀಯ ಅಸ್ಥಿರತೆಯ ನಡುವೆ ಅಲ್ಪಸಂಖ್ಯಾತ ಹಿಂದೂಗಳ ಮೇಲಿನ ಉದ್ದೇಶಪೂರ್ವಕ ದಾಳಿಗಳು ನಿಲ್ಲುವ ಲಕ್ಷಣ ಕಾಣುತ್ತಿಲ್ಲ. ದೀಪು ಚಂದ್ರ ದಾಸ್, ಅಮೃತ್ ಮಂಡಲ್ ಸೇರಿದಂತೆ ಹಲವು ಹಿಂದೂಗಳ ಸರಣಿ ಹತ್ಯೆಗಳ ಬೆನ್ನಲ್ಲೇ, ಇದೀಗ ಪತ್ರಕರ್ತ ಹಾಗೂ ಕಾರ್ಖಾನೆ ಮಾಲೀಕ ರಾಣ ಪ್ರತಾಪ್ ಅವರನ್ನು ದುಷ್ಕರ್ಮಿಗಳು ಗುಂಡಿಕ್ಕಿ ಕೊಂದಿದ್ದಾರೆ.

**ಘಟನೆಯ ಹಿನ್ನೆಲೆ**: ನೈಋತ್ಯ ಬಾಂಗ್ಲಾದೇಶದ ಜಶೋರ್ ಜಿಲ್ಲೆಯ ಮಣಿರಾಂಪುರ ಉಪ ಜಿಲ್ಲೆಯ ಕೊಪಾಲಿಯಾ ಬಜಾರ್‌ನಲ್ಲಿ ಈ ಘಟನೆ ನಡೆದಿದೆ. ಮೃತ ರಾಣ ಪ್ರತಾಪ್ ಅವರು ಕೇಶಬ್‌ಪುರ ಉಪ ಜಿಲ್ಲೆಯ ಅರುವಾ ಗ್ರಾಮದ ಶಾಲಾ ಶಿಕ್ಷಕರೊಬ್ಬರ ಪುತ್ರರಾಗಿದ್ದಾರೆ. ಇವರು ಕಳೆದ ಎರಡು ವರ್ಷಗಳಿಂದ ಕೊಪಾಲಿಯಾ ಬಜಾರ್‌ನಲ್ಲಿ ಐಸ್ ಕಾರ್ಖಾನೆ ಯೊಂದನ್ನು ನಡೆಸುತ್ತಿದ್ದರು. ಇದರೊಂದಿಗೆ ನರೈಲ್ ಜಿಲ್ಲೆಯಿಂದ ಪ್ರಕಟವಾಗುವ 'ಬಿ.ಡಿ. ಖೋಬೋರ್' ಎಂಬ ದಿನಪತ್ರಿಕೆಯ ಹಂಗಾಮಿ ಸಂಪಾದಕ ರಾಗಿಯೂ ಕಾರ್ಯ ನಿರ್ವಹಿಸುತ್ತಿದ್ದರು.

ಪ್ರತ್ಯಕ್ಷದರ್ಶಿಗಳ ಪ್ರಕಾರ, ಸೋಮವಾರ ಸಂಜೆ ಬೈಕ್‌ನಲ್ಲಿ ಬಂದ ಅಪರಿಚಿತ ದುಷ್ಕರ್ಮಿಗಳ ಗುಂಪು ರಾಣ ಪ್ರತಾಪ್ ಅವರನ್ನು ಐಸ್ ಕಾರ್ಖಾನೆಯಿಂದ ಹೊರಗೆ ಕರೆತಂದಿದ್ದಾರೆ. ಅಲ್ಲಿ ಅವರೊಂದಿಗೆ ಕೆಲ ಕಾಲ ವಾಗ್ವಾದ ನಡೆಸಿದ ದುಷ್ಕರ್ಮಿಗಳು, ಏಕಾಏಕಿ ಅವರ ತಲೆಗೆ ಗುರಿ ಇಟ್ಟು ಹಲವು ಸುತ್ತು ಗುಂಡು ಹಾರಿಸಿದ್ದಾರೆ. ರಕ್ತದ ಮಡುವಿನಲ್ಲಿ ಬಿದ್ದ ಪ್ರತಾಪ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನಾ ಸ್ಥಳದಲ್ಲಿ ಪೊಲೀಸರು ಸುಮಾರು 7 ಖಾಲಿ ಗುಂಡುಗಳನ್ನು ಪತ್ತೆ ಹಚ್ಚಿದ್ದಾರೆ.

ಮೊಹಮ್ಮದ್ ಯೂನುಸ್ ನೇತೃತ್ವದ ಮಧ್ಯಂತರ ಸರ್ಕಾರ ಅಸ್ತಿತ್ವಕ್ಕೆ ಬಂದ ದಿನದಿಂದಲೂ ಬಾಂಗ್ಲಾದೇಶದಲ್ಲಿ ಹಿಂದೂ ಸಮುದಾಯ ವನ್ನು ಗುರಿ ಮಾಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಇತ್ತೀಚಿನ ದಿನಗಳಲ್ಲಿ ಹಿಂದೂ ನಾಯಕರು, ಉದ್ಯಮಿಗಳು ಮತ್ತು ಪತ್ರಕರ್ತರನ್ನು ವ್ಯವಸ್ಥಿತವಾಗಿ ಹತ್ಯೆ ಮಾಡಲಾಗುತ್ತಿರುವುದು ಜಾಗತಿಕ ಮಟ್ಟದಲ್ಲಿ ಆತಂಕ ಮೂಡಿಸಿದೆ. ರಾಣ ಪ್ರತಾಪ್ ಅವರ ಮೇಲೆ ಈ ಹಿಂದೆ ಕೆಲವು ಪ್ರಕರಣಗಳು ದಾಖಲಾಗಿದ್ದವು ಎಂಬ ಮಾಹಿತಿ ಇದ್ದರೂ, ಅವರ ಹತ್ಯೆಯ ಹಿಂದೆ ಕೋಮು ದ್ವೇಷ ಅಥವಾ ರಾಜಕೀಯ ಪ್ರೇರಿತ ಸಂಚು ಇರುವ ಶಂಕೆಯನ್ನು ಸ್ಥಳೀಯರು ವ್ಯಕ್ತಪಡಿಸಿದ್ದಾರೆ. ಈ ಘಟನೆಯು ಸ್ಥಳೀಯ ಹಿಂದೂ ಸಮುದಾಯದಲ್ಲಿ ತೀವ್ರ ಭಯವನ್ನು ಉಂಟುಮಾಡಿದೆ. ಸರ್ಕಾರವು ಅಲ್ಪಸಂಖ್ಯಾತರಿಗೆ ರಕ್ಷಣೆ ನೀಡುವಲ್ಲಿ ವಿಫಲವಾಗಿದೆ ಎಂಬ ಆಕ್ರೋಶಗಳು ಕೇಳಿಬರುತ್ತಿವೆ.

## ಸದಸ್ಯತ್ವ ನೊಂದಣಿ ದ್ವಿಗುಣವಾದರೆ ಮಾತ್ರ ಸರ್ಕಾರಿ ಸೌಲಭ್ಯ: ಸಹದೇಶ್



ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಮಗ್ಗದವರ ಸಂಘದವರಿಂದ 2026 ನೇ ಸಾಲಿನ ಕ್ಯಾಲೇಂಡರ್ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ರಾಜ್ಯದಲ್ಲಿ ಮಗ್ಗದವರ ಕುಟುಂಬದವರ ಜನಾಂಗದವರು ಪ್ರತಿಯೊಂದು ಕ್ಷೇತ್ರದಲ್ಲಿ ಹಿಂದುಳಿದಿದ್ದಾರೆ. ವಿಶೇಷವಾಗಿ ಕೌಟುಂಬಿಕ ಕಲಹಗಳನ್ನು ಸರಿಪಡಿಸುವುದು, ಸಂಘದ ಸದಸ್ಯರಿಗೊಸ್ಕರ ಪ್ರತಿಭಾ ಪುರಸ್ಕಾರ, ಸರ್ಕಾರದ ವಿವಿಧ ಸೌಲಭ್ಯ ಒಗ್ಗೂಡಿಸುವುದು. ಸಮಸಮಾಜದ ಏಳಿಗೆಗಾಗಿ ಶಿಕ್ಷಣದಲ್ಲಿ ಪ್ರಗತಿ ಹೊಂದಲು ಶ್ರಮಿಸುತ್ತೇವೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಿದ್ಧಾಂತಕ್ಕೆ ಬದ್ದನಾಗಿ ಉಳಿದವರಿಗೆ ಆದರ್ಶದ ಧ್ವನಿಯಾಗುವೆ ಎಂದರು..

ರಾಜ್ಯಾದ್ಯಕ್ಷ ಎಂ.ದಯನಂದ ಮಾತನಾಡಿ, ಪರಿಶೀಷ್ಟ ಜಾತಿ ಮತ್ತು ಪ. ಪಂಗಡದ ಜನಾಂಗದ ಏಳಿಗೆಗಾಗಿ ಶಾಲೆ, ಭವನ, ಆಸ್ಪತ್ರೆ ಸೇರಿದಂತೆ ಹತ್ತು ಹಲವು ಸಾಮಾಜಿಕ ಚಟುವಟಿಕೆಗಳನ್ನು ತೆರೆದು ಸಮಾಜ ಸೇವೆ ಹಿತದೃಷ್ಟಿ ಯಿಂದ ನಮ್ಮ ಬೇಡಿಕೆಗಳ ಅನುಷ್ಠಾನಕ್ಕಾಗಿ ಸರ್ಕಾರದ ವಿರುದ್ಧ ನಾನಾ ಹೋರಾಟ ಅತ್ಯವಶ್ಯಕವಾಗಿದೆ. ನಮ್ಮ ಸುತ್ತ ಮುತ್ತು ಮಗ್ಗದ ಕುಟುಂಬದವರ ಸದಸ್ಯತ್ವ ಪಡೆದು ಕೊಳ್ಳಲು ಜಾಗೃತಿ ಮೂಡಿಸಬೇಕು. ಗ್ರಾಮೀಣ ಭಾಗದಲ್ಲಿ ನಿರುದ್ಯೋಗ ತಡೆ ಗಟ್ಟಲು ಕೌಶಲ್ಯ ತರಬೇತಿ ತೆರೆಯಬೇಕೆಂದರು.

ಈ ಸಂದರ್ಭದಲ್ಲಿ ದಲಿತ ಹಿರಿಯ ಮುಖಂಡ ಬೆಟ್ಟ ಕೋಟೆ ಕೃಷ್ಣ ಮೂರ್ತಿ, ರಾಜ್ಯ ಮಗ್ಗದವರ ಸಂಘ ಪದಾದಿ ಕಾರಿಗಳಾದ ಗಣಗಲೂರು ರಾಜಣ್ಣ , ಚೀಮಾಚನಹಳ್ಳಿ ರಾಜಣ್ಣ , ಹೊಸಕೋಟೆ ಪುಟ್ಟಣ್ಣ , ಜಾಲಿಗೆ ವೆಂಕಟೇಶ್, ನಾಗೇಂದ್ರಸಿಂಹ ಹಾಜರಿದ್ದರು.

# ಕರೂರು ಕಾಲ್ತುಳಿತ ಪ್ರಕರಣ: ನಟ ವಿಜಯ್‌ಗೆ ಸಿಬಿಐ ಸಮನ್ಸ್



**ಚೆನ್ನೈ/ಕರೂರು**: ಕರೂರು ಕಾಲ್ತುಳಿತ ದುರಂತ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ-ರಾಜಕಾರಣಿ ಹಾಗೂ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷದ ಸಂಸ್ಥಾಪಕ ವಿಜಯ್ ಅವರಿಗೆ ಕೇಂದ್ರ ತನಿಖಾ ದಳ (ಸಿಬಿಐ) ಸಮನ್ಸ್ ಜಾರಿ ಮಾಡಿದೆ. ಜನವರಿ 12ರಂದು ವಿಚಾರಣೆಗೆ ಹಾಜರಾಗುವಂತೆ ಸಿಬಿಐ ಸೂಚಿಸಿದೆ ಎಂದು ಮೂಲಗಳು ತಿಳಿಸಿವೆ.

2025ರ ಸೆಪ್ಟೆಂಬರ್ 27ರಂದು ತಮಿಳುನಾಡಿನ ಕರೂರು ಜಿಲ್ಲೆಯ ವೇಲುಸ್ವಾಮಿಪುರಂನಲ್ಲಿ ಟಿವಿಕೆ ಪಕ್ಷ ಆಯೋಜಿಸಿದ್ದ ರ್ಯಾಲಿಯ ವೇಳೆ ಭೀಕರ ಕಾಲ್ತುಳಿತ ದುರಂತ ಸಂಭವಿಸಿತ್ತು. ವಿಜಯ್ ಅವರ ಭಾಷಣವನ್ನು ಕೇಳಲು ನಿರೀಕ್ಷೆಗೂ ಮೀರಿ ಜನಸಂದಣಿ ಸೇರಿದ್ದರಿಂದ ವೇದಿಕೆ ಬಳಿ ಗೊಂದಲ ಉಂಟಾಗಿ ಕಾಲ್ತುಳಿತ ನಡೆದು, 41 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದರು. ಸುಮಾರು 100ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು.

ಘಟನೆಯ ಬಳಿಕ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿದ್ದು, ರ್ಯಾಲಿ ಆಯೋಜನೆಯಲ್ಲಿ ಭಾರೀ ಲೋಪಗಳಾಗಿವೆ ಎಂಬ ಆರೋಪಗಳು ಕೇಳಿಬಂದಿದ್ದವು. ಸಾರ್ವಜನಿಕ ಸುರಕ್ಷತೆ, ಪೊಲೀಸ್ ವ್ಯವಸ್ಥೆ , ಸಂಚಾರ ನಿಯಂತ್ರಣ ಹಾಗೂ ಜನಸಂದಣಿ ನಿರ್ವಹಣೆಯಲ್ಲಿ ವೈಫಲ್ಯ ಉಂಟಾಗಿದೆ ಎಂದು ಪ್ರತಿಪಕ್ಷಗಳು ಆರೋಪಿಸಿ ಸಮಗ್ರ ತನಿಖೆಗೆ ಆಗ್ರಹಿಸಿತ್ತು.

ಆರಂಭದಲ್ಲಿ ತಮಿಳುನಾಡು ಸರ್ಕಾರ ಸಿಬಿಐ ತನಿಖೆಗೆ ವಿರೋಧ ವ್ಯಕ್ತಪಡಿಸಿ, ಕಾನೂನು ಮತ್ತು ಸುವ್ಯವಸ್ಥೆ ರಾಜ್ಯದ ವಿಷಯವಾಗಿರುವುದರಿಂದ ರಾಜ್ಯ ಸರ್ಕಾರವೇ ತನಿಖೆ ನಡೆಸಲು ಸಮರ್ಥವಾಗಿದೆ ಎಂದು ವಾದಿಸಿತ್ತು. ಈ ಹಿನ್ನೆಲೆಯಲ್ಲಿ ವಿಶೇಷ ತನಿಖಾ ತಂಡ (ಎಸ್ಐಟಿ) ರಚಿಸಿ ತನಿಖೆ ಆರಂಭಿಸಲಾಗಿತ್ತು. ನ್ಯಾಯಾಲಯದ ಮುಂದೆ ಕೂಡ ಎಸ್ಐಟಿ ಸಮರ್ಥವಾಗಿದೆ ಎಂದು ಸರ್ಕಾರ ಸ್ಪಷ್ಟಪಡಿಸಿತ್ತು.

ನಂತರ ಮೃತರ ಕುಟುಂಬಗಳಿಂದ ಒತ್ತಡ ಹೆಚ್ಚಾದ ಹಿನ್ನೆಲೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಲಾಯಿತು. ಸಿಬಿಐ ತನಿಖಾಧಿಕಾರಿಗಳು ಈಗಾಗಲೇ ಟಿವಿಕೆ ಪಕ್ಷದ ಉನ್ನತ ಕಾರ್ಯಕರ್ತರು, ರ್ಯಾಲಿ ಆಯೋಜಕರು ಹಾಗೂ ಸ್ಥಳೀಯ ಅಧಿಕಾರಿಗಳನ್ನು ವಿಚಾರಣೆ ನಡೆಸಿ ಹೇಳಿಕೆಗಳನ್ನು ದಾಖಲಿಸಿದ್ದಾರೆ. ಈ ತನಿಖೆಯ ಭಾಗವಾಗಿ ಇದೀಗ ವಿಜಯ್ ಅವರಿಗೆ ನೇರವಾಗಿ ಸಮನ್ಸ್ ಜಾರಿ ಮಾಡಲಾಗಿದೆ.

ದುರಂತದ ಬಳಿಕ ವಿಜಯ್ ಸಾರ್ವಜನಿಕವಾಗಿ ಸಂತಾಪ ಸೂಚಿಸಿ, ಮೃತಪಟ್ಟವರ ಕುಟುಂಬಗಳಿಗೆ ತಲಾ 20 ಲಕ್ಷ ರೂ. ಹಾಗೂ ಗಾಯಗೊಂಡವರಿಗೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಿದ್ದರು. ಜೊತೆಗೆ ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಪಕ್ಷವೇ ಭರಿಸುವುದಾಗಿ ಪ್ರಕಟಿಸಿದ್ದರು.

ಸಿಬಿಐ ಸಮನ್ಸ್ ಹಿನ್ನೆಲೆಯಲ್ಲಿ, ವಿಜಯ್ ಅವರು ಜನವರಿ 12ರಂದು ತನಿಖಾಧಿಕಾರಿಗಳ ಮುಂದೆ ಹಾಜರಾಗಿ ತಮ್ಮ ಹೇಳಿಕೆ ನೀಡಬೇಕಾಗಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.